**ಕರ್ನಾಟಕ ಸರ್ಕಾರ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಆಯುಕ್ತರ ಕಛೇರಿ, ನಂ.16/-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-52.**
**ಸಂಖ್ಯೆ:BCWD-12022/1/2023-BCWD_HOSTEL-BCWD ದಿನಾಂಕ:26-07-2023**

**ಪ್ರಕಟಣೆ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (ಸಾಮನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ**

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ (ಸಾಮನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2023-24ನೇ ಸಾಲಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ**

| | |
|---|---|
| ಪ್ರವರ್ಗ-1, ಎಸ್.ಸಿ & ಎಸ್.ಟಿ | ರೂ.2.50 ಲಕ್ಷ |
| ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ | ರೂ.1.00 ಲಕ್ಷ |

- ವಿದ್ಯಾರ್ಥಿಗಳು https://shp.karnataka.gov.in ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 16.08.2023
- ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನ್ನು ನೋಡಬಹುದು.
- ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd.hostels@karnataka.gov.in ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು

**ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ 8050770005**

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

**2023-24ನೇ ಸಾಲಿನ ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಿಗೆ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ) ಪ್ರವೇಶ ಕಲ್ಪಿಸಲು ನಿಗದಿಪಡಿಸಿರುವ ಕಾಲಾನುಕ್ರಮಣಿಕೆ:**

| ಕ್ರ.ಸಂ | ವಿವರ | ನಿಗದಿಪಡಿಸಿದ ದಿನಾಂಕ |
|---|---|---|
| 01 | ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 26.07.2023 |
| 01 | ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 16.08.2023 |
| 02 | ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಪ್ರಕಟಣೆಯ ದಿನಾಂಕ | 21.08.2023 |
| 03 | ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ನಿಗದಿಪಡಿಸಿದ ಅಂತಿಮ ದಿನಾಂಕ | 25.08.2023 |

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.